# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೩<br>Part – III | ಬೆಂಗಳೂರು, ಬುಧವಾರ, ೧೧, ಫೆಬ್ರವರಿ, ೨೦೨೬(ಮಾಘ, ೨೨, ಶಕವರ್ಷ, ೧೯೪೭)<br>BENGALURU, WEDNESDAY, 11, FEBRUARY, 2026(MAGHA, 22, SHAKAVARSHA, 1947) | ನಂ. ೧೫೩<br>No.153 |
|---|---|---|

## ಜಿಲ್ಲಾಧಿಕಾರಿಗಳ ಕಾರ್ಯಾಲಯ, ಕೋಲಾರ ಜಿಲ್ಲೆ, ಕೋಲಾರ.

(ಚುನಾವಣೆ ಶಾಖೆ)

ನಂ. ಇಎಲ್ಎನ್ (2) ಸಿಆರ್/189/2025–26 ದಿನಾಂಕ : 11/02/2026

ವಿಷಯ : ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 41 ಮತ್ತು 42 ರಂತೆ ಅವಧಿ ಪೂರ್ಣಗೊಂಡಿರುವ / ಪೂರ್ಣಗೊಳ್ಳಲಿರುವ ಗ್ರಾಮ ಪಂಚಾಯ್ತಿಗಳಿಗೆ ಆಡಳಿತಾಧಿಕಾರಿಗ|ಳನ್ನು ನೇಮಿಸುವ ಕುರಿತು.

ಉಲ್ಲೇಖ : ಸರ್ಕಾರದ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಪತ್ರ ನಂ.ಗ್ರಾಅಪ 1003 ಗ್ರಾಪಂಆ 2025 ದಿನಾಂಕ : 16/01/2026.

2. ತಹಶೀಲ್ದಾರ್, ಮಾಲೂರು ತಾಲ್ಲೂಕು ರವರ ಪತ್ರದ ಸಂಖ್ಯೆ:ಇಎಲ್ಎನ್: ಸಿಆರ್:20: 2025–26 ದಿನಾಂಕ: 09/02/2026.

.. .. .. ..

## ಅಧಿಸೂಚನೆ

ಕೋಲಾರ ಜಿಲ್ಲೆಯ ಗ್ರಾಮ ಪಂಚಾಯಿತಿಗಳ 5 ವರ್ಷಗಳ ಅವಧಿಯು ಫೆಬ್ರವರಿ 2026 ನೇ ಮಾಹೆಯಲ್ಲಿ ಮುಗಿಯುವುದರಿಂದ, ಗ್ರಾಮ ಪಂಚಾಯಿತಿಗಳಿಗೆ ಸಾರ್ವತ್ರಿಕ ಚುನಾವಣೆಯು ನಡೆದಿಲ್ಲವಾದ್ದರಿಂದ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 8(1)(ಬಿ)(**ii**)ರಡಿ ಆಡಳಿತಾಧಿಕಾರಿಯನ್ನು ನೇಮಿಸುವಂತೆ ಉಲ್ಲೇಖ (1) ರಂತೆ ಸರ್ಕಾರವು ನಿರ್ದೇಶಿಸಿರುವ ಹಿನ್ನೆಲೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 41 ಮತ್ತು 42 ರಂತೆ ಅವಧಿ ಪೂರ್ಣಗೊಂಡಿರುವ / ಪೂರ್ಣಗೊಳ್ಳಲಿರುವ ***ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನ 28 ಗ್ರಾಮ ಪಂಚಾಯ್ತಿಗಳಿಗೆ*** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 8(1)(ಬಿ)(**ii**)ರ ಪ್ರಕಾರ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ***ಡಾ॥ ಎಂ. ಆರ್. ರವಿ ಭಾ.ಆ.ಸೇ.,*** ಜಿಲ್ಲಾಧಿಕಾರಿ, ಕೋಲಾರ ಜಿಲ್ಲೆ, ಕೋಲಾರ ಆದ ನಾನು ಈ ಕೆಳಕಂಡ ಕೋಷ್ಟಕದ ಅಂಕಣ 3 ರಲ್ಲಿ ನಮೂದಿಸಿರುವ ಗ್ರಾಮ ಪಂಚಾಯ್ತಿಗಳಿಗೆ ಅಂಕಣ 4 ರಲ್ಲಿ ನಮೂದಿಸಿರುವಂತೆ ಗ್ರಾಮ ಪಂಚಾಯಿತಿ ಸದಸ್ಯರುಗಳ 05 ವರ್ಷಗಳ ಅವಧಿ ಪೂರ್ಣಗೊಂಡಿರುವುದರಿಂದ / ಪೂರ್ಣಗೊಳ್ಳಲಿರುವುದರಿಂದ ಅಂಕಣ 2 ರಲ್ಲಿ ನಮೂದಿಸಿರುವ ಅಧಿಕಾರಿಗಳನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ ಆಡಳಿತಾಧಿಕಾರಿಗಳನ್ನಾಗಿ ನೇಮಕ ಮಾಡಿ ಆದೇಶಿಸಿದ್ದೇನೆ.

| ಕ್ರ. ಸಂ. | ಆಡಳಿತಾಧಿಕಾರಿಯಾಗಿ ನೇಮಕಗೊಳಿಸಿರುವ ಅಧಿಕಾರಿಯ ಪದನಾಮ ಮತ್ತು ವಿಳಾಸ | ಗ್ರಾಮ ಪಂಚಾಯ್ತಿಗಳ ಹೆಸರು | ಅವಧಿ ಪೂರ್ಣಗೊಳ್ಳುವ ದಿನಾಂಕ |
|---|---|---|---|
| 1 | 2 | 3 | 4 |
| 1 | ಕ್ಷೇತ್ರ ಶಿಕ್ಷಣಾಧಿಕಾರಿಗಳು, ಮಾಲೂರು ತಾಲ್ಲೂಕು | ಲಕ್ಕೂರು | 10/02/2026 |
| | | ದೊಡ್ಡಶಿವಾರ | 10/02/2026 |
| 2 | ಕಾರ್ಯನಿರ್ವಣಾಧಿಕಾರಿಗಳು, ತಾಲ್ಲೂಕು ಪಂಚಾಯಿತಿ, ಮಾಲೂರು ತಾಲ್ಲೂಕು | ನೊಸಗೆರೆ | 09/02/2026 |
| | | ಕೆ.ಜಿ.ಹಳ್ಳಿ | 10/02/2026 |
| | | ಹೆಚ್. ಹೊಸಕೋಟೆ | 09/02/2026 |
| | | ಮಡಿವಾಳ | 09/02/2026 |
| 3 | ಶಿಶು ಅಭಿವೃದ್ಧಿ ಮತ್ತು ಯೋಜನಾಧಿಕಾರಿಗಳು, ಮಾಲೂರು ತಾಲ್ಲೂಕು | ಮಾಸ್ತಿ | 11/02/2026 |
| | | ಚಿಕ್ಕಕುಂತೂರು | 11/02/2026 |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ ಉಪ ವಿಭಾಗ, ಮಾಲೂರು ತಾಲ್ಲೂಕು | ದಿನ್ನಹಳ್ಳಿ | 11/02/2026 |
| | | ಜಯಮಂಗಲ | 08/02/2026 |
| 5 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮಾಲೂರು ತಾಲ್ಲೂಕು | ಹುಂಗೇನಹಳ್ಳಿ | 10/02/2026 |
| | | ಕುಡಿಯನೂರು | 10/02/2026 |
| | | ಹಸಾಂಡಹಳ್ಳಿ | 10/02/2026 |
| 6 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಮಾಲೂರು ತಾಲ್ಲೂಕು | ಡಿ.ಎನ್.ದೊಡ್ಡಿ | 09/02/2026 |
| | | ಹುಳದೇನಹಳ್ಳಿ | 08/02/2026 |
| | | ಬಾಳಿಗಾನಹಳ್ಳಿ | 09/02/2026 |
| 7 | ತಹಶೀಲ್ದಾರ್, ಮಾಲೂರು ತಾಲ್ಲೂಕು | ತೊರ್ನಹಳ್ಳಿ | 08/02/2026 |
| | | ಅಬ್ಬೇನಹಳ್ಳಿ | 09/02/2026 |
| 8 | ಸಹಾಯಕ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಮಾಲೂರು ತಾಲ್ಲೂಕು | ಕೊಂಡಶೆಟ್ಟಿಹಳ್ಳಿ | 08/02/2026 |
| | | ತ್ಯಣಸಿ | 11/02/2026 |
| 9 | ಸಹಾಯಕ ಲೆಕ್ಕಾಧಿಕಾರಿ, ತಾಲ್ಲೂಕು ಪಂಚಾಯಿತಿ, ಮಾಲೂರು ತಾಲ್ಲೂಕು | ಅರಳೇರಿ | 11/02/2026 |
| | | ಶಿವಾರಪಟ್ಟಣ | 10/02/2026 |
| 10 | ಸಹಾಯಕ ನಿರ್ದೇಶಕರು, ಮೀನುಗಾರಿಕೆ ಇಲಾಖೆ, ಮಾಲೂರು ತಾಲ್ಲೂಕು | ರಾಜೇನಹಳ್ಳಿ | 11/02/2026 |
| | | ನೂಟವೆ | 10/02/2026 |
| 11 | ಸಹಾಯಕ ನಿರ್ದೇಶಕರು, (ಗ್ರಾ.ಉ) ತಾಲ್ಲೂಕು ಪಂಚಾಯಿತಿ, ಮಾಲೂರು ತಾಲ್ಲೂಕು | ಚಿಕ್ಕತಿರುಪತಿ | 09/02/2026 |
| | | ಸಂತೇಹಳ್ಳಿ | 08/02/2026 |
| 12 | ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಮಾಲೂರು ತಾಲ್ಲೂಕು | ಬನಹಳ್ಳಿ | 08/02/2026 |
| | | ಟೇಕಲ್ | 09/02/2026 |

ಸರ್ಕಾರದ ದಿನಾಂಕ : 19/6/2020ರ ಸುತ್ತೋಲೆಯಂತೆ, ಆಡಳಿತಾಧಿಕಾರಿಗಳ ಅಧಿಕಾರ ಮತ್ತು ಕರ್ತವ್ಯಗಳು ಈ ಕೆಳಕಂಡಂತಿರುತ್ತದೆ.

1. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 8(4) ರನ್ವಯ ಆಡಳಿತಾಧಿಕಾರಿಯನ್ನು ಈ ಅಧಿನಿಯಮದ ಉದ್ದೇಶಕ್ಕಾಗಿ ಕ್ರಮಬದ್ಧವಾಗಿ ರಚಿಸಿದ ಗ್ರಾಮ ಪಂಚಾಯಿತಿ ಎಂದು ಭಾವಿಸಲಾಗಿದೆ.

2. ಸದರಿ ಅಧಿನಿಯಮದ ಪ್ರಕರಣ 8(3) ರನ್ವಯ ಆಡಳಿತಾಧಿಕಾರಿಯು ಗ್ರಾಮ ಪಂಚಾಯಿತಿಯ ಎಲ್ಲಾ ಅಧಿಕಾರಗಳನ್ನು ಮತ್ತು ಕರ್ತವ್ಯಗಳನ್ನು ಚಲಾಯಿಸತಕ್ಕದ್ದು ಮತ್ತು ನೆರವೇರಿಸತಕ್ಕದ್ದಾಗಿದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



3. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ರನ್ವಯ ಗ್ರಾಮ ಪಂಚಾಯಿತಿಯ ಹಣಕಾಸಿನ ವ್ಯವಹಾರವನ್ನು ಆಡಳಿತಾಧಿಕಾರಿ ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಜಂಟಿಯಾಗಿ ನಿರ್ವಹಿಸತಕ್ಕದ್ದು.

4. ವಾರ್ಡ್ ಸಭೆ ಮತ್ತು ಗ್ರಾಮ ಸಭೆಗಳನ್ನು ಕಾಲ ಕಾಲಕ್ಕೆ ನಡೆಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

5. ಅಧಿನಿಯಮದ ಪ್ರಕರಣ 58 ರಂತೆ ಗ್ರಾಮ ಪಂಚಾಯಿತಿ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು.

6. ಅಧಿನಿಯಮದ ಪ್ರಕರಣ 60 ರಂತೆ ಗ್ರಾಮ ಪಂಚಾಯಿತಿಯ ಸಾಮಾನ್ಯ ಅಧಿಕಾರಿಗಳನ್ನು ಚಲಾಯಿಸತಕ್ಕದ್ದು.

7. ಅಧಿನಿಯಮದ ಪ್ರಕರಣ 62 ರಂತೆ ಅಧ್ಯಕ್ಷನ ಪ್ರಕಾರ್ಯಗಳು ಮತ್ತು ಅಧಿಕಾರಗಳನ್ನು ಚಲಾಯಿಸತಕ್ಕದ್ದು.

8. ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ನಿರ್ವಹಣೆಯನ್ನು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮ ಪಂಚಾಯಿತಿಗಳಿಗೆ ವರ್ಗಾಯಿಸಲಾಗಿದ್ದು, ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ನಿರ್ವಹಣೆ ಮಾಡತಕ್ಕದ್ದು ಮತ್ತು ಗ್ರಂಥಾಲಯ ಮೇಲ್ವಿಚಾರಕರಿಗೆ ಗೌರವಧನವನ್ನು ಮಾಸಿಕವಾಗಿ ಪಾವತಿಸತಕ್ಕದ್ದು.

9. ಗ್ರಾಮ ಪಂಚಾಯಿತಿ ನೌಕರರಿಗೆ ಮಾಸಿಕವಾಗಿ ಕನಿಷ್ಠ ವೇತನ ಪಾವತಿಸತಕ್ಕದ್ದು.

10. ಸರ್ಕಾರದ ಸುತ್ತೋಲೆ ಸಂಖ್ಯೆ ಗ್ರಾಅಪ 74 ಗ್ರಾಪಂಸಿ 2017 (ಭಾಗ-1) ದಿನಾಂಕ : 12/3/2018 ರಲ್ಲಿ ಗ್ರಾಮ ಪಂಚಾಯಿತಿಗಳು ಯಾವುದೇ ಹುದ್ದೆಗಳಿಗೆ ನೇಮಕಾತಿ ಮಾಡುವುದನ್ನು ಸಂಪೂರ್ಣ ನಿಷೇಧಿಸಲಾಗಿದೆ. ಆಡಳಿತಾಧಿಕಾರಿಯು ಗ್ರಾಮ ಪಂಚಾಯಿತಿಗೆ ಯಾವುದೇ ನೌಕರರನ್ನು ನೇಮಕ ಮಾಡಿಕೊಳ್ಳತಕ್ಕದ್ದಲ್ಲ.

ಜಿಲ್ಲಾಧಿಕಾರಿಗಳು,
ಕೋಲಾರ ಜಿಲ್ಲೆ, ಕೋಲಾರ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH